ಕರ್ನಾಟಕ ವಿಧಾನ ಸಭೆ, ಸಂಶೋಧನೆ ಮತ್ತು ಉಲ್ಲೇಖನ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 3/1/2020

# ಪೌರ ಶಾಸನ- ಕೇರಳ ನಿರ್ಣಯ ತಿರಸ್ಕೃತ

ಸಂಕ 3/1/2020

ತಿರುವನಂತಪುರಂ: ಪೌರತ್ವ ತಿದ್ದುಪಡಿ ಕಾಯ್ದೆ(ಸಿಎಎ) ರದ್ದುಗೊಳಿಸುವಂತೆ ಒತ್ತಾಯಿಸಿ ರಾಜ್ಯ ವಿಧಾನಸಭೆ ನಿರ್ಣಯ ಅಂಗೀಕರಿಸಿರುವುದು ಕಾನೂನು ಬಾಹಿರ ಮತ್ತು ಸಂವಿಧಾನ ಬಾಹಿರ ಎಂದು ಕೇರಳ ರಾಜ್ಯಪಾಲ ಆರಿಫ್ ಮೊಹಮ್ಮದ್ ಅವರು ಗುರುವಾರ ಹೇಳಿದ್ದಾರೆ.

ಪೌರತ್ವ ಕೇಂದ್ರ ಪಟ್ಟಿಯಲ್ಲಿ ಬರುತ್ತದೆ ಮತ್ತು ಇದು ಕೇಂದ್ರ ಸರ್ಕಾರದ ನಿರ್ಧಾರ. ಇದರಲ್ಲಿ ರಾಜ್ಯ ಸರ್ಕಾರದ ಪಾತ್ರ ಇರುವುದಿಲ್ಲ ಎಂದು ರಾಜ್ಯಪಾಲರು ಸುದ್ದಿಗಾರರಿಗೆ ತಿಳಿಸಿದ್ದಾರೆ.

ಪೌರತ್ವ ವಿಚಾರ ಕೇಂದ್ರ ಸರ್ಕಾರದ ಅಧೀನದಲ್ಲಿ ಬರುತ್ತದೆ. ಈ ವಿಚಾರದಲ್ಲಿ ರಾಜ್ಯ ಸರ್ಕಾರ ಏನು ಮಾಡಲು ಬರುವುದಿಲ್ಲ. ಈ ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಅನಗತ್ಯವಾಗಿ ಸಮಯ ಹಾಳು ಮಾಡುತ್ತಿದೆ. ವಿಧಾನಸಭೆಯಲ್ಲಿ ಸಿಎಎ ವಿರುದ್ಧ ನಿರ್ಣಯ ಅಂಗೀಕರಿಸಿರುವುದು ಕಾನೂನು ಬಾಹಿರ ಎಂದು ಹೇಳಿದ್ದಾರೆ.

ಪೌರತ್ವ ಕಾಯ್ದೆ ಕೇರಳ ರಾಜ್ಯದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಏಕೆಂದರೆ ಇಲ್ಲಿ ಯಾವುದೇ ಅಕ್ರಮ ವಲಸಿಗರು ಇಲ್ಲ. ಹೀಗಾಗಿ ರಾಜ್ಯದ ಮೇಲೆ ಯಾವುದೇ ಪರಿಣಾಮ ಆಗುವುದಿಲ್ಲ ಎಂದು ರಾಜ್ಯಪಾಲರು ತಿಳಿಸಿದ್ದಾರೆ. ಕೇರಳ ಸರ್ಕಾರದ ಈ ಕ್ರಮ ರಾಷ್ಟ್ರಕ್ಕೆ ಮಾದರಿಯಾಗಲಿದೆ ಎಂದು ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಸಮರ್ಥಿಸಿಕೊಂಡಿದ್ದರು.